ಮಂಗಳೂರು ಜಿಲ್ಲಾ ಕಾರಾಗೃಹಕ್ಕೆ ಕೆಳಕಂಡ ಹೆಚ್ಚುವರಿ ಹುದ್ದೆಗಳನ್ನು ಕೋರಲಾಗಿದೆ.

ಚೀಫ್ ವಾರ್ಡರ್	3 ಹುದ್ದೆ
ಹೆಡ್ ವಾರ್ಡರ್	11 ಹುದ್ದೆ
ವಾರ್ಡರ್	37 ಹುದ್ದೆ
ಒಟ್ಟು	51 ಹುದ್ದೆ

ಸುರತ್ಕಲ್ ಠಾಣೆಯನ್ನು ಮೇಲ್ದರ್ಜೆಗೆ ಏರಿಸುವುದು

288 (180) ಶ್ರೀ ಕುಂಬ್ಳೆ ಸುಂದರರಾವ್ (ಸುರತ್ಕಲ್) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸುರತ್ಕಲ್ ವಿಧಾನಸಭಾ ಕ್ಷೇತ್ರದಲ್ಲಿ ಹೆಚ್ಚು ವ್ಯಾಪ್ತಿಯನ್ನು ಹೊಂದಿರುವ ಪೋಲೀಸ್ ಠಾಣೆ ಯಾವುದು ;

ಆ) ಕಾನೂನು ಸುವ್ಯವಸ್ಥೆ ದೃಷ್ಟಿಯಿಂದ ಹೊಸ ಠಾಣೆಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಇ) ಹಾಗಿದ್ದಲ್ಲಿ ಸ್ಥಾಪನೆಗೊಳ್ಳಲಿರುವ ಹೊಸ ಠಾಣೆಗಳ ಸಂಖ್ಯೆ ಎಷ್ಟು ಹಾಗೂ ಎಲ್ಲೆಲ್ಲಿ ಸ್ಥಾಪಿಸಲಾಗುವುದು ಮತ್ತು ಎಂದಿನಿಂದ ಸ್ಥಾಪಿಸಲಾಗುವುದು ;

ಈ) ಸುರತ್ಕಲ್ ಠಾಣೆಯನ್ನು ಮೇಲ್ದರ್ಜೆಗೇರಿಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಉ) ಹಾಗಿದ್ದಲ್ಲಿ ಸದರಿ ಠಾಣೆಯನ್ನು ಎಂದಿನಿಂದ ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಪಿ. ಜಿ. ಆರ್. ಸಿಂಧ್ಯ (ಗೃಹ ಸಚಿವರು) :

ಅ) ಸುರತ್ಕಲ್ ವಿಧಾನಸಭೆ ಕ್ಷೇತ್ರದಲ್ಲಿ ಮಂಗಳೂರು ಪೋಲೀಸ್ ಠಾಣೆ ಹೆಚ್ಚು ವ್ಯಾಪ್ತಿಯನ್ನು ಹೊಂದಿರುತ್ತದೆ.

ಆ) ಇಲ್ಲ

ಇ) ಉದ್ಭವಿಸುವುದಿಲ್ಲ.

ಈ) ಸರ್ಕಾರದ ಪರಿಶೀಲನೆಯಲ್ಲಿದೆ.

ಉ) ಸರ್ಕಾರದ ಪರಿಶೀಲನೆಯಲ್ಲಿದೆ.